ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ.ಸಂಖ್ಯೆ:**208/2024**

ಪಿರ್ಯಾದಿ : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,

ವಿರುದ್ಧ

ಆರೋಪಿ : ನೀಲಪ್ಪಗೌಡ, ವಯಸ್ಸು ಸುಮಾರು 46 ವರ್ಷ,
ಬಿನ್ ತುಕ್ರಪ್ಪ, ಕೆ.ಎಸ್.ಆರ್.ಟಿ.ಸಿ ಬಸ್ ಚಾಲಕ,
ಬಿ.ಸಂ.29858, ಧರ್ಮಸ್ಥಳ ಘಟಕ,
ಪುತ್ತೂರು ವಿಭಾಗ, ಸ್ವಂತ ವಿಳಾಸಃ ಕಾಣದಡ್ಕ,
ಹಳಿಕೆ ಅಂಚೆ, ಬಂಟ್ವಾಳ ತಾಲ್ಲೂಕು,
ದಕ್ಷಿಣ ಕನ್ನಡ ಜಿಲ್ಲೆ.

ಆಪಾದನೆಯ ಸಾರಾಂಶ.

ಶ್ರೀ. ವಿಶ್ವನಾಥ್ ಎ., C/c ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

**1.** ದಿನಾಂಕ 07.07.2023 ರಂದು ಮಧ್ಯಾಹ್ನ 3.15 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ತರುವೆ ಗ್ರಾಮದ ಚಾರ್ಮಾಡಿ ಘಾಟಿಯ ಅಣ್ಣಪ್ಪಸ್ವಾಮಿ ದೇವಾಲಯದಿಂದ ಕೊಟ್ಟಿಗೆಹಾರದ ಕಡೆಗೆ ಸ್ವಲ್ಪ ಮುಂದೆ ಹಾದು ಹೋಗಿರುವ ಎನ್.ಹೆಚ್-73 ರಸ್ತೆಯ ತಿರುವಿನಲ್ಲಿ ಚಾಸಾ1 ಮತ್ತು 12 ರವರು ಉಜಿರೆಯಿಂದ ಕೆಎ-17-ಎಫ್-1901 ನೇ ನೋಂದಣಿ ಸಂಖ್ಯೆಯ ಕೆ.ಎಸ್.ಆರ್.ಟಿ.ಸಿ ಬಸ್ ನಲ್ಲಿ ಕೊಟ್ಟಿಗೆಹಾರ ಕಡೆಗೆ ಹೋಗುತ್ತಿರುವಾಗ, ಎದುರುಗಡೆಯಿಂದ ಅಂದರೆ ಕೊಟ್ಟಿಗೆಹಾರದ ಕಡೆಯಿಂದ ಬಂದಂತಹ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆಃಕೆಎ-21-ಎಫ್-0215 ನೇ ಕೆ.ಎಸ್.ಆರ್.ಟಿ.ಸಿ ಬಸ್ ಅನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **279** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಕೆಎ-17-ಎಫ್-1901 ನೇ ನೋಂದಣಿ ಸಂಖ್ಯೆಯ ಕೆ.ಎಸ್.ಆರ್.ಟಿ.ಸಿ ಬಸ್ ಗೆ ಡಿಕ್ಕಿಪಡಿಸಿದ ಪರಿಣಾಮ, ಸದರಿ ಬಸ್ ನ

ಚಾಲಕರಾದ ಚಾಸಾ11 ರವರ ಹೊಟ್ಟೆಯ ಭಾಗಕ್ಕೆ ಸಾಮಾನ್ಯ ಸ್ವರೂಪದ ಗಾಯ, ನಿಮ್ಮ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಚಾಸಾ4 ರವರ ಬಲಗಡೆ ಹಣೆ ಹತ್ತಿರ, ಚಾಸಾ5 ರವರ ಬಲಕಾಲಿಗೆ, ಎಡಕಾಲಿಗೆ, ಚಾಸಾ7 ರವರ ಎರಡೂ ಕಾಲಿನ ಮಂಡಿಗೆ, ಎಡ ಭುಜಕ್ಕೆ, ಚಾಸಾ8 ರವರ ಬಲ ಭುಜಕ್ಕೆ, ಬಲಗಾಲಿನ ಮಂಡಿಗೆ, ಚಾಸಾ10 ರವರ ಎಡ ಮತ್ತು ಬಲಭಾಗದ ಭುಜಕ್ಕೆ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **337** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಕೆಎ-17-ಎಫ್-1901 ನೇ ನೋಂದಣಿ ಸಂಖ್ಯೆಯ ಕೆ.ಎಸ್.ಆರ್.ಟಿ.ಸಿ ಬಸ್ ಗೆ ಡಿಕ್ಕಿಪಡಿಸಿದ ಪರಿಣಾಮ, ಸದರಿ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಚಾಸಾ1 ರವರ ಮೇಲ್ದುಟಿಗೆ ರಕ್ತಗಾಯ, ಬಲಕೆನ್ನೆಗೆ, ಎಡಕೈನ ಮಧ್ಯದ ಬೆರಳಿಗೆ, ಎಡಕಾಲಿನ ಮಂಡಿಗೆ ಹಾಗೂ ಬಲಕಾಲಿನ ಪಾದದ ಮೇಲೆ ತೀವ್ರ ಸ್ವರೂಪದ ಗಾಯ, ಚಾಸಾ3 ರವರ ಹೊಟ್ಟೆಯ ಎಡಭಾಗಕ್ಕೆ ತೀವ್ರ ಸ್ವರೂಪದ ಗಾಯ ಹಾಗೂ ನಿಮ್ಮ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಚಾಸಾ2 ರವರ ತಲೆಯ ಹಿಂಭಾಗಕ್ಕೆ, ಬಲಗೈ ಮಣಿಕಟ್ಟು ಮುರಿದು ತೀವ್ರ ಸ್ವರೂಪದ ಗಾಯ ಹಾಗೂ ಚಾಸಾ6 ರವರ ಬಲಕಾಲಿನ ಮಂಡಿ, ಬಲಗೈ ಭುಜಕ್ಕೆ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **338** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರ: 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 15.07.2024 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕಃ 15.07.2024.